# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **2160 (2392)** |
| **ಮಾನ್ಯ ಸದಸ್ಯರ ಹೆಸರು** | **ಡಾ. ಉಮಾಶ್ರೀ<br>(ನಾಮನಿರ್ದೇಶನ ಹೊಂದಿದವರು)** |
| **ಉತ್ತರಿಸಬೇಕಾದ ದಿನಾಂಕ** | **27 /03/2026** |
| **ಉತ್ತರಿಸುವವರು** | **ಮಾನ್ಯ ಕಾರ್ಮಿಕ ಸಚಿವರು** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ವಲಸೆ ಕಾರ್ಮಿಕರ ಸಂಖ್ಯೆಯೆಷ್ಟು; ಇದುವರೆಗೂ ಎಷ್ಟು ಕಾರ್ಮಿಕರು ಇಲಾಖೆಯಲ್ಲಿ ನೋಂದಾಯಿಸಿ ಕೊಂಡಿರುತ್ತಾರೆ; | ರಾಜ್ಯದಲ್ಲಿರುವ ವಲಸೆ ಕಾರ್ಮಿಕರಿಗೆ ಸಂಬಂಧಿಸಿ ದಂತೆ ಈವರೆಗೆ ಯಾವುದೇ ಸಮೀಕ್ಷೆ ನಡೆಸಿರುವುದಿಲ್ಲ. ಆದ್ದರಿಂದ ನಿಖರ ಸಂಖ್ಯೆ ಲಭ್ಯವಿರುವುದಿಲ್ಲ. ಆದರೆ, ವಿವಿಧ ಕಾರ್ಮಿಕ ಕಾಯ್ದೆಗಳಡಿ ಸಂಸ್ಥೆಯ ನೋಂದಣಿ ಸಂದರ್ಭದಲ್ಲಿ ಹಾಗೂ ಕಾರ್ಮಿಕ ಇಲಾಖೆಯು ಅಂತರ ರಾಜ್ಯ ವಲಸೆ ಕಾರ್ಮಿಕರ (ಉದ್ಯೋಗ ನಿಯಂತ್ರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ 1979 ಅನ್ನು ಕಾರ್ಯಗತ ಗೊಳಿಸಿದ್ದು, ಸದರಿ ಕಾಯ್ದೆ ಯನ್ವಯ ಅಂತರ್ ರಾಜ್ಯ ಕಾರ್ಮಿಕರನ್ನು ನೇಮಕ ಮಾಡಿಕೊಳ್ಳುವ ಮುಂಚೆ ಇಲಾಖೆಯ ಸಹಾಯಕ ಕಾರ್ಮಿಕ ಆಯುಕ್ತರುಗಳ ಬಳಿ ಪರವಾನಿಗೆ ಪತ್ರವನ್ನು ಪಡೆಯಬೇಕಿದ್ದು ಸದರಿ ಪರವಾನಗಿಯಲ್ಲಿನ ಕಾರ್ಮಿಕರ ಸಂಖ್ಯೆಯ ಮಾಹಿತಿ ಪ್ರಕಾರ ರಾಜ್ಯ ದಲ್ಲಿರುವ ವಲಸೆ ಕಾರ್ಮಿಕರ **ಸಂಖ್ಯೆ ಒಟ್ಟು 46,393.**<br><br>ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳಲ್ಲಿ ನೋಂದಣಿಯಾಗಿರುವ ವಲಸೆ ಕಾರ್ಮಿಕರ ಮಾಹಿತಿ ಈ ಕೆಳಂಡಂತೆ ಇರುತ್ತದೆ.<br><br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**<br>ಈ ಮಂಡಳಿಯಲ್ಲಿ ರಾಜ್ಯದಲ್ಲಿರುವ ಒಟ್ಟು ವಲಸೆ ಕಾರ್ಮಿಕರ ಮಾಹಿತಿ ಲಭ್ಯವಿರುವುದಿಲ್ಲ. 2023 ರ ನಂತರ ವಲಸೆ ಕಾರ್ಮಿಕರ ವಿವರಗಳನ್ನು ಶೇಖರಿಸುತ್ತಿದ್ದು ಈ ಅವಧಿಯಲ್ಲಿ ಅನ್ಯ ರಾಜ್ಯ ಗಳಿಂದ ವಲಸೆ ಬಂದು ಕಟ್ಟಡ ಮತ್ತು ಇತರೆ ನಿರ್ಮಾಣ ಕೆಲಸ ಮಾಡುವ **40945** ನೋಂದಾಯಿತ ರಾಗಿರುತ್ತಾರೆ. ವಿವಿಧ ರಾಜ್ಯಗಳಿಂದ ಬಂದಿರುವ ವಿವರ **ಅನುಬಂಧ-1 ರಲ್ಲಿ** ಒದಗಿಸಿದೆ |
| ಆ) | ನೋಂದಣಿ ಮಾಡಿಕೊಂಡಿರುವ ಕಾರ್ಮಿಕರು ಯಾವ ಯಾವ ರಾಜ್ಯದಿಂದ ಬಂದಿರುತ್ತಾರೆ; ಇವರಿಗೆ ನೀಡಲಾಗುತ್ತಿರುವ ಸೌಲಭ್ಯಗಳೇನು; | |

| | | |
|---|---|---|
| | | ಹಾಗೂ ನೋಂದಾಯಿತ ಫಲಾನುಭವಿಗಳಿಗೆ ನೀಡಲಾಗುವ ಎಲ್ಲಾ ಸೌಲಭ್ಯಗಳನ್ನು ವಲಸೆ ಕಾರ್ಮಿಕರಿಗೂ ನೀಡಲಾಗುತ್ತಿದ್ದು, ವಿವರಗಳನ್ನು **ಅನುಬಂಧ-2 ರಲ್ಲಿ** ಒದಗಿಸಿದೆ.<br><br>**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:**<br>ಈ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಲ್ಲಿ ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆಯನ್ನು ಹೊರತುಪಡಿಸಿ ಉಳಿದೆಲ್ಲಾ ಯೋಜನೆಗಳು ರಾಜ್ಯದ ಕಾರ್ಮಿಕರಿಗೆ ಮಾತ್ರ ಅನ್ವಯಿಸುತ್ತಿದ್ದು, ಸದರಿ ಯೋಜನೆಯ ಮಾರ್ಗಸೂಚಿಯನ್ವಯ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರ ರಾಜ್ಯದ ಕಾರ್ಮಿಕರು ಸಹ ಯೋಜನೆಯಡಿ ನೋಂದಣಿಗೆ ಅರ್ಹರಿದ್ದು, ಈ ಯೋಜನೆಯಡಿ ಈವರೆಗೆ ಒಟ್ಟು 10475 ಕಾರ್ಮಿಕರು ನೋಂದಣಿಯಾಗಿದ್ದು, ಅವರಲ್ಲಿ ಹೊರ ರಾಜ್ಯದ ಒಟ್ಟು 1316 ಗಿಗ್ ಕಾರ್ಮಿಕರು ನೋಂದಣಿಯಾಗಿರುತ್ತಾರೆ. ರಾಜ್ಯವಾರು ಮಾಹಿತಿ ಯನ್ನು **ಅನುಬಂಧ-3 ರಲ್ಲಿ** ಒದಗಿಸಿದೆ.<br><br>❖ **ಈ ಯೋಜನೆಯಡಿ ದೊರಕುವ ಸೌಲಭ್ಯಗಳು:**<br>➢ ಅಪಘಾತದಿಂದ ಮರಣ ಹೊಂದಿದಲ್ಲಿ ವಿಮಾ ಪರಿಹಾರ ರೂ2.00 ಲಕ್ಷ ಹಾಗೂ ರೂ2.00 ಲಕ್ಷ ಜೀವ ವಿಮಾ ಸೇರಿ ಒಟ್ಟು ರೂ.4.00 ಲಕ್ಷಗಳು.<br>➢ ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2.00 ಲಕ್ಷಗಳವರೆಗೆ<br>➢ ಆಸ್ಪತ್ರೆ ವೆಚ್ಚ ಮರುಪಾವತಿ ರೂ.1.00 ಲಕ್ಷಗಳವರೆಗೆ (ಅಪಘಾತ ಪ್ರಕರಣಗಳಿಗೆ ಮಾತ್ರ)<br>➢ ಜೀವ ವಿಮಾ ರೂ.2.00 ಲಕ್ಷಗಳು.<br><br>ಮುಂದುವರೆದು, ಗಿಗ್ ಕಾರ್ಮಿಕರಿಗೆ ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಒದಗಿಸುವ ಉದ್ದೇಶದಿಂದ ಸಂಪನ್ಮೂಲ ಕ್ರೋಢೀಕರಿಸಲು Karnataka Platform based Gig Workers (Social Security and Welfare) Act, 2025 ಅನ್ನು **ದಿನಾಂಕ:12-09-2025** ರಂದು ಸರ್ಕಾರವು ಅಧಿಸೂಚಿಸಿರುತ್ತದೆ ಮತ್ತು ಇದಕ್ಕನುಗುಣವಾಗಿ ನಿಯಮಾವಳಿಯನ್ನು **ದಿನಾಂಕ:19-11-2025** |

| | | |
|---|---|---|
| | | ರಂದು ಅಧಿಸೂಚಿಸಲಾಗಿ ಮಂಡಳಿಯನ್ನು ರಚಿಸಲಾಗಿರುತ್ತದೆ. ಈ ಕಾಯ್ದೆಯಡಿ ಸುಂಕದ ರೂಪದಲ್ಲಿ ಸಂಗ್ರಹವಾಗಬಹುದಾದ ಅನುದಾನದಿಂದ ಮುಂದಿನ ದಿನಗಳಲ್ಲಿ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳನ್ನು ರೂಪಿಸಿ ಜಾರಿಗೊಳಿಸಲಾಗುವುದು. |
| ಇ) | ಅನ್ಯ ರಾಜ್ಯದ ಕಾರ್ಮಿಕರ ಎದುರು ಸ್ಥಳೀಯ ಕಾರ್ಮಿಕರಿಗೆ ಕೆಲಸವಿಲ್ಲದಂತಾಗಿರುವುದು ಸರಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೇ. ಇದನ್ನು ತಡೆಗಟ್ಟಲು ಸರಕಾರ ತೆಗೆದುಕೊಂಡ ಕ್ರಮವೇನು; | ಅನ್ಯ ರಾಜ್ಯದ ಕಾರ್ಮಿಕರ ಎದುರು ಸ್ಥಳೀಯ ಕಾರ್ಮಿಕರಿಗೆ ಕೆಲಸವಿಲ್ಲದಂತಾಗಿರುವ ಬಗ್ಗೆ ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ. |
| ಈ) | ರಾಜ್ಯದಲ್ಲಿ ವಲಸೆ ಕಾರ್ಮಿಕರ ಸಂಖ್ಯೆ ಸುಮಾರು 20 ಲಕ್ಷಕ್ಕೂ ಹೆಚ್ಚಿದ್ದು, ಇದರಲ್ಲಿ ಕೇವಲ 5% ರಷ್ಟು ವಲಸಿಗರು ಮಾತ್ರ ನೋಂದಣಿ ಮಾಡಿಸಿ ಕೊಂಡಿರುವುದು ನಿಜವೇ; | ಗುತ್ತಿಗೆದಾರರು 5 ಕ್ಕಿಂತ ಹೆಚ್ಚು ಕಾರ್ಮಿಕರನ್ನು ನೇಮಿಸಿಕೊಂಡಿದ್ದಲ್ಲಿ ಮಾತ್ರ ಅಂತರ ರಾಜ್ಯ ವಲಸೆ ಕಾರ್ಮಿಕರ (ಉದ್ಯೋಗ ನಿಯಂತ್ರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ 1979 ರಡಿ ಪರವಾನಿಗೆ ಪಡೆಯಬೇಕಾಗಿರುತ್ತದೆ. ಅಲ್ಲದೇ ಈ ಕಾಯ್ದೆಯಡಿ ಕಾರ್ಮಿಕರ ನೋಂದಣಿಗೆ ಯಾವುದೇ ಅವಕಾಶಗಳು ಇರುವುದಿಲ್ಲ. |
| ಉ) | ವಲಸಿಗರಿಂದ ನಗರ ಮತ್ತು ಗ್ರಾಮೀಣ ಭಾಗದ ಸ್ಥಳೀಯ ಕಾರ್ಮಿಕರಿಗೆ ಅನ್ಯಾಯವಾಗುತ್ತಿದ್ದು, ಇದಕ್ಕೆ ಕಾರಣ ಏನೆಂಬುದನ್ನು ಸರ್ಕಾರ ಚಿಂತಿಸಿದೆಯೇ? | ವಲಸಿಗರಿಂದ ನಗರ ಮತ್ತು ಗ್ರಾಮೀಣ ಭಾಗದ ಸ್ಥಳೀಯ ಕಾರ್ಮಿಕರಿಗೆ ಮತ್ತು ರಾಜ್ಯದಲ್ಲಿರುವ ಕನ್ನಡಿಗರಿಗೆ ಅನ್ಯಾಯ/ ನಿರುದ್ಯೋಗಿಗಳಾಗಿರುವುದರ ಬಗ್ಗೆ ಯಾವುದೇ ದೂರುಗಳು ಈವರೆಗೆ ಸ್ವೀಕೃತವಾಗಿರುವುದಿಲ್ಲ. |
| ಊ) | ವಲಸಿಗರು ನೇಕಾರಿಕೆ, ಕೃಷಿ, ಕಿಟಂಗ್ ಶಾಪ್, ಚಾಲನೆ ಮತ್ತು ಇನ್ನಿತರೆ ಎಲ್ಲಾ ಕೆಲಸಗಳನ್ನು ಮಾಡುತ್ತಿರುವುದರಿಂದ, ರಾಜ್ಯದಲ್ಲಿರುವ ಕನ್ನಡಿಗರು ನಿರುದ್ಯೋಗಿಗಳಾಗುತ್ತಾರೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ? | |

**ಕಾಇ 162 ಎಲ್‌ಇಟಿ 2026**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**

## ಅನುಬಂಧ-1

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಡಾ: ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2392 (2160)

## ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ನೋಂದಣಿಯಾಗಿರುವ ಕಾರ್ಮಿಕರ ವಿವಿಧ ರಾಜ್ಯಗಳ ವಿವರ

| ಕ್ರ. ಸಂ. | ರಾಜ್ಯ/ಕೇಂದ್ರಾಡಳಿತ ಪ್ರದೇಶ | ಕಾರ್ಮಿಕರ ಸಂಖ್ಯೆ |
|---|---|---|
| 1 | Andaman and Nicobar Islands | 05 |
| 2 | Andhra Pradesh | 2120 |
| 3 | Arunachal Pradesh | 31 |
| 4 | Assam | 986 |
| 5 | Bihar | 9489 |
| 6 | Chandigarh | 158 |
| 7 | Dadra and Nagar Haveli and Daman and Diu | 01 |
| 8 | Delhi | 49 |
| 9 | Goa | 166 |
| 10 | Gujarat | 23 |
| 11 | Haryana | 29 |
| 12 | Himachal Pradesh | 08 |
| 13 | Jammu and Kashmir | 09 |
| 14 | Jharkhand | 6021 |
| 15 | Kerala | 164 |
| 16 | Madhya Pradesh | 377 |
| 17 | Maharashtra | 512 |
| 18 | Manipur | 6 |
| 19 | Meghalaya | 19 |
| 20 | Lakshadweep | 01 |
| 21 | Nagaland | 03 |
| 22 | Odisha | 3508 |
| 23 | Puducherry | 03 |
| 24 | Punjab | 63 |
| 25 | Rajasthan | 542 |
| 26 | Sikkim | 01 |
| 27 | Tamil Nadu | 1782 |
| 28 | Telangana | 177 |
| 29 | Tripura | 57 |
| 30 | Uttar Pradesh | 3845 |
| 31 | Uttarakhand | 60 |
| 32 | West Bengal | 10730 |

## ಅನುಬಂಧ-2

### ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಡಾ: ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2392 (2160)

### ಮಂಡಳಿಯ ವತಿಯಿಂದ ಫಲಾನುಭವಿಗಳು ಮತ್ತು ಅವಲಂಭಿತರಿಗೆ ನೀಡುತ್ತಿರುವ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರ:

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.3,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ/ಪತ್ನಿಗೆ ಮಾಸಿಕ **ರೂ.1500/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ /ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆ ಅನುಗ್ರಹರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ).
5. **ಟ್ರೈನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ. 20,000/- ವರೆಗೆ.**
6. **ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ.
7. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ.50,000/-.
8. **ಅಂತ್ಯಕ್ರಿಯೆ ವೆಚ್ಚ: ರೂ. 4,000/-** ಹಾಗೂ ಅನುಗ್ರಹ ರಾಶಿ **ರೂ.1,46,000/-** ಸಹಾಯಧನ.

| ಕ್ರ. ಸಂ | ಕೋರ್ಸ್/ತರಗತಿ | ತರಗತಿ/ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) | ಸ್ನಾತ್ತಕೋತ್ತರ ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) |
|---|---|---|---|
| 1 | 1ನೇ ತರಗತಿಯಿಂದ 5ನೇ ತರಗತಿ | 1,800/- | - |
| 2 | 6ನೇ ತರಗತಿಯಿಂದ 8ನೇ ತರಗತಿ | 2,400/- | - |
| 3 | 9 ಮತ್ತು 10ನೇ ತರಗತಿ | 3,000/- | - |
| 4 | ಪಿಯುಸಿ, 11 ಹಾಗೂ 12ನೇ ತರಗತಿ ಅಥವಾ ತತ್ಸಮಾನ ಕೋರ್ಸ್. | 6,000/- | - |
| 5 | 10ನೇ ತರಗತಿ ನಂತರದ ಐಟಿಐ/ ತತ್ಸಮಾನ ತಾಂತ್ರಿಕ ಕೋರ್ಸ್‌ಗಳು | 10,000/- | - |
| 6 | ಪಿಯುಸಿ ನಂತರದ ಯಾವುದೇ ಡಿಪ್ಲೋಮ ತರಗತಿ. | 12,000/- | - |
| 7 | ಸಾಮಾನ್ಯ ಪದವಿ (ಜನರಲ್ ಡಿಗ್ರಿ) - ಬಿಎ, ಬಿಕಾಂ, ಬಿಎಸ್ಸಿ ಮುಂತಾದವಗಳು | 15,000/- | 20,000/- |
| 8 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ Vocational ವೃತ್ತಿಪರ ಕೋರ್ಸ್‌ಗಳು ಕಾನೂನು ಪದವಿ ಸಹಿತ (Professional Courses) | 20,000/- | 25,000/- |
| 9 | ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ತಾಂತ್ರಿಕ ವೃತ್ತಿಪರ ಕೋರ್ಸ್‌ಗಳು (Professional Courses) | 25,000/- | 35,000/- |
| 10 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ಅರೆ ವೈದ್ಯಕೀಯ | 20,000/- | 25,000/- |

| | | | |
|---|---|---|---|
| | ವೃತ್ತಿಪರ ಕೋರ್ಸ್‌ಗಳು (Para Medical Courses) | | |
| 11 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Professional Courses) | 25,000/- | 35,000/- |
| 12 | ರಾಷ್ಟ್ರೀಯ ಕಾನೂನು ಶಾಲೆಗಳಿಗೆ ಸಮನಾದ ಕಾನೂನು ವಿದ್ಯಾ ಸಂಸ್ಥೆಗಳು | 40,000/- | 50,000/- |
| 13 | ಪಿಹೆಚ್‌ಡಿ/ಎಮ್‌ಫಿಲ್ (03 ವರ್ಷ ಅವಧಿಯವರೆಗೆ) | 40,000/- | - |
| 14 | IIT, IIIT, AIMS, IISc, IISERC ನಂತಹ ಪ್ರತಿಷ್ಠಿತ ರಾಷ್ಟ್ರೀಯ ವಿದ್ಯಾಸಂಸ್ಥೆಗಳು. | 50,000/- | 60,000/- |

9. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ. 300/- ರಿಂದ ರೂ. 20,000/- ವರೆಗೆ.**
10. **ಅಪಘಾತ ಪರಿಹಾರ:** ನೊಂದಾಯಿತ ಕಟ್ಟಡ ಕಾರ್ಮಿಕರು ಕೆಲಸದ ಸ್ಥಳದಲ್ಲಿ **ಮರಣ** ಹೊಂದಿದ್ದಲ್ಲಿ **ರೂ.8,00,000/- ಹಾಗೂ** ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ. 2,00,000/-.**
11. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ , ಕಿಡ್ನಿಶಸ್ತ್ರ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆಮುರಿತ/ ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/- ವರೆಗೆ.**
12. **ಮದುವೆ ಸಹಾಯ ಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ **ತಲಾ ರೂ. 60,000/-.**
13. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ. 6,000/- ಗಳ** ಸಹಾಯಧನ.
14. **ಸುರಕ್ಷತಾ ಕಿಟ್:** ನೋಂದಾಯಿತ ಕಾರ್ಮಿಕರ ವೃತ್ತಿಗನುಗುಣವಾಗಿ ಸುರಕ್ಷತಾ ಕಿಟ್‌ಗಳ ವಿತರಣೆ
15. **ಸಂಚಾರಿ ಆರೋಗ್ಯ ಕ್ಲಿನಿಕ್ ಯೋಜನೆ:** ನೋಂದಾಯಿತ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಆರೋಗ್ಯ ತಪಾಸಣೆ ಮಾಡುವ ಮೂಲಕ ಅವಶ್ಯಕ ಔಷಧೋಪಚಾರಗಳ ವಿತರಣೆ
16. **ಪ್ರೀವೆಂಟಿವ್ ಹೆಲ್ತ್ ಕೇರ್ ಯೋಜನೆ:** ನೋಂದಾಯಿತ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಆರೋಗ್ಯದ ಮುನ್ನೆಚ್ಚರಿಗಾಗಿ ನಿಗಧಿತ 23 ರೀತಿಯ ವೈದ್ಯಕೀಯ ಪರೀಕ್ಷೆಗಳನ್ನು ನಡೆಸಿ ವೈದ್ಯಕೀಯ ವರದಿಗಳ ವಿತರಣೆ

**ಅನುಬಂಧ-3**

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಡಾ: ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2392 (2160)**

ಗಿಗ್ ಕಾರ್ಮಿಕರ ವಿಮಾ ಯೋಜನೆಯಡಿ ನೋಂದಾಯಿತರಾದ ಹೊರ ರಾಜ್ಯದ ಅಸಂಘಟಿತ ಕಾರ್ಮಿಕರ ವಿವರ

| Sl.No. | State | Total |
|---|---|---|
| 1 | Andhra Pradesh | 114 |
| 2 | Assam | 296 |
| 3 | Bihar | 192 |
| 4 | Chandigarh | 1 |
| 5 | Chhattisgarh | 2 |
| 6 | Delhi | 2 |
| 7 | Goa | 0 |
| 8 | Gujarat | 4 |
| 9 | Haryana | 5 |
| 10 | Jammu Kashmir | 4 |
| 11 | Jharkhand | 38 |
| 12 | Karnataka | 28 |
| 13 | Kerala | 22 |
| 14 | Madhya Pradesh | 9 |
| 15 | Maharashtra | 13 |
| 16 | Manipur | 5 |
| 17 | Nagaland | 5 |
| 18 | Odisha | 275 |
| 19 | Punjab | 3 |
| 20 | Rajasthan | 11 |
| 21 | Sikkim | 1 |
| 22 | Tamil Nadu | 42 |
| 23 | Telangana | 4 |
| 24 | Tripura | 45 |
| 25 | Uttar Pradesh | 55 |
| 26 | Uttarakhand | 4 |
| 27 | West Bengal | 136 |
| **Grand Total** | | **1316** |